# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST | ಇದು ಸುದ್ದಿ ವಿಳಾಸ | ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 114 | Pages. 2 | Date: 07-04-2026, TUESDAY | RNI NO: KARKAN/2024/89601 | Kannada Daily

ಸಂಪುಟ : 02 – ಸಂಚಿಕೆ : 114 – ಪುಟಗಳು : 2 | 07-04-2026 | ಮಂಗಳವಾರ | Ph: 8762954248 | ದರ : ₹1


## ತಂಬಾಕಿಗೆ ವೈಜ್ಞಾನಿಕ ಬೆಲೆ ನೀಡಿ: ಅಹೋರಾತ್ರಿ ಧರಣಿ

### ಮಾರುಕಟ್ಟೆಯಲ್ಲೇ ಅಡುಗೆ ತಯಾರಿಸಿದ ಪ್ರತಿಭಟನಾಕಾರರು | ಕೇಂದ್ರದ ವಿರುದ್ಧ ಆಕ್ರೋಶ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಅರಕಲಗೂಡು: ಕೇಂದ್ರ ಸರ್ಕಾರ ಕೂಡಲೇ ಮಧ್ಯ ಪ್ರವೇಶಿಸಿ ಹೊಗೆಸೊಪ್ಪು ಬೆಳೆಗೆ ವೈಜ್ಞಾನಿಕ ಬೆಲೆ ನಿಗದಿಪಡಿಸಬೇಕು ಎಂದು ಆಗ್ರಹಿಸಿ ಭಾರತೀಯ ಕಿಸಾನ್ ಸಂಘದ ಕಾರ್ಯಕರ್ತರು ಸೋಮವಾರ ತಾಲ್ಲೂಕಿನ ರಾಮನಾಥಪುರ ತಂಬಾಕು ಮಾರುಕಟ್ಟೆ ಆವರಣದಲ್ಲಿ ಅಡುಗೆ ತಯಾರಿಸಿ ಅಹೋರಾತ್ರಿ ಧರಣಿ ಆರಂಭಿಸಿದರು.

ಎಲ್ಲಾ ಗ್ರೇಡ್ ಬೇಲ್‌ಗಳನ್ನು ಅಧಿಕ ದರದೊಂದಿಗೆ ಖರೀದಿಸಬೇಕು ಎಂದು ಆಗ್ರಹಿಸಿ ತಂಬಾಕಿಗೆ ವೈಜ್ಞಾನಿಕ ಬೆಲೆ ನೀಡಿ ಸ್ಥಿರ ದರ ಕಾಪಾಡಿಕೊಳ್ಳುವಲ್ಲಿ ನಿರ್ಲಕ್ಷ್ಯ ವಹಿಸಲಾಗಿದೆ. ಆರಂಭದಲ್ಲಿ 320 ರೂ. ದರ ನೀಡಿದ್ದು ತದನಂತರದ ಹರಾಜಿನಲ್ಲಿ ಬೇಕಾಬಿಟ್ಟಿ ಬೆಲೆ ನೀಡಿ ರೈತರಿಗೆ ಮೋಸ ಮಾಡಲಾಗುತ್ತಿದೆ. ಕೆಳ ದರ್ಜೆಯ ಬೇಲ್‌ಗಳನ್ನು ಖರೀದಿಸದೆ ರೈತರಿಗೆ ಕಿರುಕುಳ ನೀಡಲಾಗುತ್ತಿದೆ. ಒಮ್ಮೆ ಮಾರುಕಟ್ಟೆಗೆ ತಂದ ಬೇಲ್ ಗಳನ್ನು ಬಿಡ್ ಮಾಡದೆ ತಿರಸ್ಕರಿಸಿ ವಾಪಸ್ ಕಳುಹಿಸಲಾಗುತ್ತಿದೆ. ಅದರಿಂದ ರೈತರು ಮತ್ತೆ ಬೇಲ್‌ಗಳನ್ನು ಮಾಡಿ ಮಾರುಕಟ್ಟೆಗೆ ತಂದು ಬೇಕಾಬಿಟ್ಟಿ ಬೆಲೆಗೆ ಮಾರಾಟ ಮಾಡುವಷ್ಟರಲ್ಲಿ ಹೈರಾಣಾಗುತ್ತಿದ್ದು ಮಾರುಕಟ್ಟೆಯಲ್ಲಿ ಬೆಳೆಗಾರರು ಅನುಭವಿಸುತ್ತಿರುವ ಕಷ್ಟ ಕೇಳುವವರೇ ಇಲ್ಲವಾಗಿದ್ದಾರೆ. ಬೆಳೆಗಾರರ ಹಿತ ಕಾಯಬೇಕಿದ್ದ ತಂಬಾಕು ಮಂಡಳಿ ನಿಷ್ಕ್ರೀಯವಾಗಿದ್ದು, ಶ್ರೀಮಂತ ಕಂಪನಿಗಳ ವರ್ತಕರ ಕೈಗೊಂಬೆಯಾಗಿ ವರ್ತಿಸಿ ಅನ್ನದಾತರನ್ನು ಶೋಷಣೆ ಮಾಡುತ್ತಿದೆ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.

ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡ ಹಾಗೂ ಸಂಸದ ಶ್ರೇಯಸ್ ಪಟೇಲ್, ಶಾಸಕರು ಕೇಂದ್ರ ವಾಣಿಜ್ಯ ಸಚಿವ ಪಿಯೂಷ್ ಗೋಯಲ್ ಅವರನ್ನು ಭೇಟಿ ಮಾಡಿದರೂ ಪ್ರಯೋಜನವಾಗಿಲ್ಲ. ಸಂಸತ್ ಅಧಿವೇಶನದಲ್ಲಿ ಸಂಸದರಾದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಮತ್ತು ಶ್ರೇಯಸ್ ಪಟೇಲ್ ಅವರು ಹೊಗೆಸೊಪ್ಪು ಬೆಳೆಗಾರರ ಪರ ಧ್ವನಿ ಎತ್ತಿದರೂ ಸಚಿವರು ಉತ್ತರ ನೀಡದೆ ನಿರ್ಲಕ್ಷ್ಯಿಸುತ್ತಿದ್ದಾರೆ. ಕೇಂದ್ರ ಸರ್ಕಾರ ತಂಬಾಕು ಬೆಳೆಗಾರರನ್ನು ಬೀದಿಗೆ ತಳ್ಳುತ್ತಿದೆ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ಭಾರತದಲ್ಲಿ ಉತ್ಪಾದಿಸಿದ ತಂಬಾಕು ಖರೀದಿಸಲು ವಿದೇಶಿ ಕಂಪನಿಗಳಿಗೆ ಮುಕ್ತ ಮಾರುಕಟ್ಟೆ ವ್ಯವಸ್ಥೆಗೆ ಅವಕಾಶ ಮಾಡಿಕೊಡಬೇಕು. ಸರ್ಕಾರ ತಂಬಾಕು ಬೆಳೆಗಾರರ ನೆರವಿಗೆ ಬರುವ ತನಕ ಅಹೋರಾತ್ರಿ ಧರಣಿ ಮುಂದುವರಿಯಲಿದೆ ಎಂದರು.

ಭಾರತೀಯ ಕಿಸಾನ್ ಸಂಘದ ಮಂಡ್ಯ ಪ್ರಾಂತ್ಯ ಅಧ್ಯಕ್ಷ ಹಾಡ್ಯ ರಮೇಶ್ ರಾಜ್, ಸಂಘಟನಾ ಕಾರ್ಯದರ್ಶಿ ನಾರಾಯಣಸ್ವಾಮಿ, ಪ್ರಧಾನ ಕಾರ್ಯದರ್ಶಿ ಸೋಮಶೇಖರ್, ಜಿಲ್ಲಾ ಘಟಕದ ಅಧ್ಯಕ್ಷ ಹೆಚ್.ಬಿ.ಮಲ್ಲಪ್ಪ, ಉಪಾಧ್ಯಕ್ಷ ಸಣ್ಣೇಗೌಡ, ತಾಲ್ಲೂಕು ಗೌರವಾಧ್ಯಕ್ಷ ಯೋಗಣ್ಣ, ತಾಲ್ಲೂಕು ಅಧ್ಯಕ್ಷ ಬಿ.ಸಿ.ರವಿ, ಉಪಾಧ್ಯಕ್ಷ ಮಂಜು, ಕಾರ್ಯದರ್ಶಿ ಜಗನ್ನಾಥ್, ಕಾರ್ಯಾಧ್ಯಕ್ಷ ವೀರೇಂದ್ರ, ಖಜಾಂಚಿ ವೇದಾನಂದ, ಮಲ್ಲೇಶ್, ತಮ್ಮೇಗೌಡ ಇತರರು ಇದ್ದರು.

## ಗ್ಯಾಸ್ ಏಜೆನ್ಸಿಗಳು ಗ್ರಾಹಕರೊಂದಿಗೆ ಸೌಜನ್ಯದಿಂದ ವರ್ತಿಸಿ : ಜಿಲ್ಲಾಧಿಕಾರಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ಗೃಹ ಮತ್ತು ವಾಣಿಜ್ಯ ಬಳಕೆ ಗ್ಯಾಸ್ ಸಿಲಿಂಡರ್‌ಗಳನ್ನು ವಿತರಣೆ ಮಾಡುವ ಏಜೆನ್ಸಿಗಳು ಸ್ಥಳೀಯವಾಗಿ ಯಾವುದೇ ಸಮಸ್ಯೆಗಳು ಉದ್ಭವಿಸದಂತೆ ಎಚ್ಚರಿಕೆ ವಹಿಸಿ ಗ್ರಾಹಕರೊಂದಿಗೆ ಸ್ಪಂದಿಸಿ ಶಾಂತಿಯುತವಾಗಿ ನಡೆದುಕೊಳ್ಳುವಂತೆ ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ತಿಳಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸೋಮವಾರ ನಡೆದ ವಾಣಿಜ್ಯ/ಗೃಹಬಳಕೆ ಎಲ್ ಪಿಜಿ ಸಿಲಿಂಡರ್ ಪೂರೈಕೆಯಲ್ಲಿ ನಿಯಂತ್ರಣ ಮತ್ತು ಮೇಲ್ವಿಚಾರಣೆ ಕುರಿತು ಸಭೆ ನಡೆಸಿ ಮಾತನಾಡಿದ ಅವರು, ವಿತರಕರು ಸರ್ಕಾರ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲನೆಮಾಡುಂತೆ ಸೂಚಿಸಿದರು.

ಗೃಹ ಬಳಕೆ ಮತ್ತು ವಾಣಿಜ್ಯ ಬಳಕೆ ಗ್ಯಾಸ್ ಸಿಲಿಂಡರ್‌ಗೆ ಬುಕಿಂಗ್ ಮಾಡಿದಾಗ ಸಾರ್ವಜನಿಕರಿಗೆ ತೊಂದರೆಯಾಗದಂತೆ ನಿಗದಿತ ಅವಧಿಯೊಳಗೆ ಗ್ಯಾಸ್ ಸಿಲಿಂಡರ್ ಒದಗಿಸಲು ಕ್ರಮವಹಿಸಲು ಸೂಚಿಸಿದರಲ್ಲದೆ ದುರ್ಬಳಕೆ ಕಂಡು ಬಂದಲ್ಲಿ ಗಂಭೀರವಾಗಿ ಪರಿಗಣಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಕಂಪನಿ, ವಿತರಕರು, ಬುಕ್ಕಿಂಗ್, ದಾಸ್ತಾನು ಲಭ್ಯ, ಎಷ್ಟು ಗ್ಯಾಪ್ ಇದೆ ಎಂಬುದರ ಮಾಹಿತಿಯನ್ನು ಪ್ರತಿದಿನದ ಮಾಹಿತಿ ಒದಗಿಸುವಂತೆ ಆಹಾರ ನಾಗರಿಕ ಸರಬರಾಜು ಇಲಾಖೆಯ ಜಂಟಿ ನಿರ್ದೇಶಕರಿಗೆ ಸೂಚನೆ ನೀಡಿದರು.

ಹೆಚ್ಚುವರಿ ಪೊಲೀಸ್ ವರಿಷ್ಟಾಧಿಕಾರಿ ಶ್ರೀನಿಧಿ, ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಕೃಷ್ಣಮೂರ್ತಿ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಜಂಟಿ ನಿರ್ದೇಶಕ ಅರುಣ್ ಕುಮಾರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಅನಿಲ್, ಗ್ಯಾಸ್ ಏಜೆನ್ಸಿ ಮಾಲೀಕರು ಹಾಗೂ ಹೋಟೇಲ್ ಮಾಲೀಕರು ಸಭೆಯಲ್ಲಿ ಭಾಗವಹಿಸಿದ್ದರು.

## ಏ. 11ರಿಂದ ಕುಣಿಯೋಣು ಬಾರ ಮಕ್ಕಳ ಶಿಬಿರ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**




ಹಾಸನ: ಮಕ್ಕಳಲ್ಲಿ ಅಡಗಿರುವ ಸೃಜನಶೀಲತೆ, ಕಲಾತ್ಮಕತೆ ಮತ್ತು ವ್ಯಕ್ತಿತ್ವದ ಸಮಗ್ರ ಬೆಳವಣಿಗೆ ಉತ್ತೇಜಿಸುವ ಉದ್ದೇಶದಿಂದ ಕುಣಿಯೋಣು ಬಾರ ಎಂಬ ವಿಶೇಷ ಬೇಸಿಗೆ ರಂಗ ಶಿಬಿರವನ್ನು ಏ.11 ರಿಂದ 30ರ ವರೆಗೆ ಆಯೋಜಿಸಲಾಗಿದೆ ಎಂದು ಶಿಬಿರದ ಸಂಚಾಲಕಿ ಹಾಗೂ ರಂಗಭೂಮಿ ಕಲಾವಿದೆ ಪೂಜಾ ರಘುನಂದನ್ ತಿಳಿಸಿದರು.

ಸೋಮವಾರ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು, ರಂಗ ಹೃದಯ ಹಾಸನ, ಸಂಸ್ಕೃತಿ ಟ್ರಸ್ಟ್ ಹಾಗೂ ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ತು ಸಂಯುಕ್ತ ಆಶ್ರಯದಲ್ಲಿ ನಡೆಯುತ್ತಿರುವ ಶಿಬಿರದಲ್ಲಿ ಜಿಲ್ಲೆಯ ಮಕ್ಕಳಿಗೆ ವಿಶಿಷ್ಟ ಕಲಿಕಾ ಅನುಭವ ನೀಡುವ ಮೂಲಕ ಅವರ ಬೇಸಿಗೆ ರಜೆಯನ್ನು ಅರ್ಥಪೂರ್ಣಗೊಳಿಸಲು ಯೋಜಿಸಲಾಗಿದೆ ಎಂದರು.

ಸತತ 3 ವರ್ಷಗಳಿಂದ ಯಶಸ್ವಿಯಾಗಿ ನಡೆಯುತ್ತಿರುವ ಶಿಬಿರವು ಮಕ್ಕಳ ಸಾಂಸ್ಕೃತಿಕ ಬೆಳವಣಿಗೆಯಲ್ಲಿ ಮಹತ್ವದ ಪಾತ್ರವಹಿಸಿದೆ.ಈ ವರೆಗೆ ಶಿಬಿರದಲ್ಲಿ ಭಾಗವಹಿಸಿ ಅಭಿನಯ, ನೃತ್ಯ, ಸಂಗೀತ ಕಲಿತು ವಿವಿಧ ಕ್ಷೇತ್ರಗಳಲ್ಲಿ ತಮ್ಮ ಪ್ರತಿಭೆ ಮೆರೆದಿದ್ದಾರೆ ಎಂದರು.

ಸಂಚಾಲಕ ಪ್ರದೀಪ್ ರಂಗಾಯಣ ಮಾತನಾಡಿ, ಈ ಬಾರಿ ಜಾನಪದ ರಂಗಶಿಬಿರ ಮಾಡಲಾಗುತ್ತಿದೆ. ನುರಿತ ಸಂಪನ್ಮೂಲ ವ್ಯಕ್ತಿಗಳಿಂದ ಅಭಿನಯದ ಪ್ರಾಥಮಿಕ ಪಾಠ,

ನಾಟಕ ರಚನೆ, ಸಂಭಾಷಣಾ ಕೌಶಲ ಮತ್ತು ಜನಪದ ರಂಗಭೂಮಿಯ ತಂತ್ರಗಳನ್ನು ತಿಳಿಸಲಾಗುವುದು. ಜೊತೆಗೆ ಜಾನಪದ ನೃತ್ಯ, ಶಾಸ್ತ್ರೀಯ ಸಂಗೀತ, ಹಸೆ ಚಿತ್ರಕಲೆ ಹಾಗೂ ಕರಕುಶಲ ಕಲೆಯಂತಹ ಸಾಂಪ್ರದಾಯಿಕ ಕಲೆ ಪರಿಚಯವನ್ನು ಮಕ್ಕಳಿಗೆ ಮಾಡಿಕೊಡಲಾಗುತ್ತದೆ. ಶಿಬಿರದ ಭಾಗವಾಗಿ ಒಂದು ದಿನದ ಶೈಕ್ಷಣಿಕ ಪ್ರವಾಸ ಸಹ ಆಯೋಜಿಸಲಾಗಿದ್ದು, ಇದು ಮಕ್ಕಳಿಗೆ ಹೊಸ ಅನುಭವ ನೀಡುವ ಜೊತೆಗೆ ಅವರ ಸಾಮಾಜಿಕ ಅರಿವು ವಿಸ್ತರಿಸುತ್ತದೆ ಎಂದರು.

ಪ್ರತಿದಿನ ಬೆ.10 ರಿಂದ ಸಂಜೆ 4 ರವರೆಗೆ ಹಾಸನಾಂಬಾ ಕಲಾಕ್ಷೇತ್ರ ಆವರಣ ಹಾಗೂ ಶಾಸ್ತಾಸ್ ಪಬ್ಲಿಕ್ ಶಾಲೆ ಆವರಣದಲ್ಲಿ ನಡೆಯಲಿದೆ. 5 ರಿಂದ 15 ವರ್ಷದೊಳಗಿನ ಮಕ್ಕಳಿಗೆ ಅವಕಾಶವಿದ್ದು, ಮಕ್ಕಳ ಸೃಜನಶೀಲತೆ ಮತ್ತು ವ್ಯಕ್ತಿತ್ವದ ಸಮಗ್ರ ಬೆಳವಣಿಗೆಗಾಗಿ ಆಸಕ್ತ ಪೋಷಕರು ಶಿಬಿರಕ್ಕೆ ಕಳುಹಿಸಬಹುದು ಎಂದರು. ಹೆಚ್ಚಿನ ಮಾಹಿತಿಗಾಗಿ 99860-78790, 76764-43338 ಅಥವಾ ಅಕ್ಷರ ಬುಕ್ ಹೌಸ್ ಮಳಿಗೆ ಸಂಪರ್ಕಿಸಲು ಕೋರಲಾಗಿದೆ.

ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ ಅಧ್ಯಕ್ಷ ಬಿ.ಕೆ.ಗಂಗಾಧರ್ ಮಾತನಾಡಿ, ಮಕ್ಕಳಿಗೆ ಹೊಸ ಕಲಿಕೆ, ಹೊಸ ಸ್ನೇಹ ಮತ್ತು ' ಅನುಭವ ನೀಡುವ ಶಿಬಿರಕ್ಕೆ ತಲಾ 2500 ರೂ. ಶುಲ್ಕ ನಿಗದಿಪಡಿಸಲಾಗಿದೆ. ನೇಪಥ್ಯಕ್ಕೆ ಸರಿಯುತ್ತಿರುವ ಹಸೆ ಚಿತ್ರಕಲೆಯಂತಹ ಹಳೆಯ ಕಲೆಯನ್ನು ಮಕ್ಕಳಿಗೆ ಪರಿಚಯಿಸಲಾಗುತ್ತಿದೆ. ಆ ಮೂಲಕ ಪೂರ್ವಜನರು ಉಳಿಸಿದ್ದ ಕಲೆಯನ್ನು ಮುಂದಿನ ತಲೆಮಾರಿಗೆ ಪರಿಚಯಿಸಿ, ಬೆಳೆಸುವ ಕೆಲಸವನ್ನು ಶಿಬಿರದ ಮೂಲಕ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಸುದ್ದಿಗೋಷ್ಟಿಯಲ್ಲಿ ಚಿನ್ನೇಹಳ್ಳಿ ಸ್ವಾಮಿ ಇದ್ದರು.

## ಹಂಪನಹಳ್ಳಿ ತಿಮ್ಮೇಗೌಡರಿಗೆ ಜಿಲ್ಲಾ ಸಾಹಿತ್ಯ ಬಳಗದಿಂದ ಸನ್ಮಾನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ಜಾನಪದ ವಿದ್ವಾಂಸ, ಸಾಹಿತಿ, ಸಂಶೋಧಕ ಹಂಪನಹಳ್ಳಿ ತಿಮ್ಮೇಗೌಡ ಅವರ ದಾಸ ಒಕ್ಕಲಿಗ ಸಂಶೋಧನಾ ಕೃತಿಗೆ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಲಭಿಸಿರುವ ಹಿನ್ನೆಲೆ, ಜಿಲ್ಲಾ ಸಾಹಿತ್ಯ ಬಳಗದ ವತಿಯಿಂದ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕೇಂದ್ರ ಸಾಹಿತ್ಯ ವೇದಿಕೆಯ ಸಂಸ್ಥಾಪಕ ಅಧ್ಯಕ್ಷ ಕೊಟ್ರೇಶ್ ಉಪ್ಪಾರ್ ಮಾತನಾಡಿ, ಜಿಲ್ಲೆಯ ಸಾಹಿತ್ಯ ವಲಯಕ್ಕೆ ಮತ್ತೊಂದು ಕಿರೀಟ ತಂದುಕೊಟ್ಟ ಸಾಧನೆ ಇದಾಗಿದ್ದು, ಜನಪದ ಕ್ಷೇತ್ರದಲ್ಲಿ ಮಹತ್ವದ ಕೆಲಸ ಮಾಡಿದ ತಿಮ್ಮೇಗೌಡರಿಗೆ ಲಭಿಸಿದ ಈ ಪ್ರಶಸ್ತಿ ಜಿಲ್ಲೆಯ ಹೆಮ್ಮೆ ಹೆಚ್ಚಿಸಿದೆ ಎಂದು ಹೇಳಿದರು.

ಈ ಕೃತಿ ಒಂದು ಜಾತಿಗೆ ಸೀಮಿತವಾಗದೇ, ಅದರ ಸಂಸ್ಕೃತಿ, ಪರಂಪರೆ ಹಾಗೂ ಜೀವನ ಶೈಲಿಯನ್ನು ಆಳವಾಗಿ ಪ್ರತಿಬಿಂಬಿಸುವ ಸಂಶೋಧನಾ ಕೃತಿಯಾಗಿದೆ. ತಿಮ್ಮೇಗೌಡರು ಈ ಹಿಂದೆ ಜನಪದ ಅಕಾಡೆಮಿಯಿಂದಲೂ ಪುರಸ್ಕೃತರಾಗಿದ್ದು, ಇದೀಗ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿಯೂ ಲಭಿಸಿರುವುದು ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ಜಿಲ್ಲೆಯ ಸಾಹಿತ್ಯ ಚಟುವಟಿಕೆಗಳಿಗೆ ಗೌರವ ತಂದಿದೆ ಎಂದರು.

ಪತ್ರಕರ್ತ ಚಲಂ ಹಾಡ್ಲಹಳ್ಳಿ ಮಾತನಾಡಿ, ಹಂಪನಳ್ಳಿ ತಿಮ್ಮೇಗೌಡರು ಜಿಲ್ಲೆಯ ಸಾಹಿತ್ಯ ಬೇರುಗಳನ್ನು ಗಟ್ಟಿಗೊಳಿಸಿದ ಪ್ರಮುಖರಲ್ಲಿ ಒಬ್ಬರು. ಅವರು ಯುವ ಸಾಹಿತಿಗಳಿಗೆ ಪ್ರೇರಣೆಯಾಗಿದ್ದು, ಅವರ ಬಗ್ಗೆ ಇನ್ನಷ್ಟು ಅಧ್ಯಯನ ಮತ್ತು ಪ್ರಚಾರ ಅಗತ್ಯವಿದೆ ಎಂದರು. ಯೋಗ ಶಿಕ್ಷಕ ಸುರೇಶ್ ಗುರೂಜಿ ಮಾತನಾಡಿ, ತಿಮ್ಮೇಗೌಡರ ವ್ಯಕ್ತಿತ್ವ ಜಿಲ್ಲೆಯ ಮಟ್ಟಿಗೆ ಮಾದರಿಯಾಗಿದ್ದು, ಅವರು ಮುಂದಿನ ದಿನಗಳಲ್ಲಿ ಸಾಹಿತ್ಯ ವಲಯಕ್ಕೆ ಮಾರ್ಗದರ್ಶಕರಾಗಬೇಕು ಎಂದು ಆಶಿಸಿದರು.

ಕನ್ನಡ ಸಾಹಿತ್ಯ ಪರಿಷತ್ತಿನ ಮಾಜಿ ಗೌರವಾಧ್ಯಕ್ಷ ರವಿ ನಾಕಲಗೂಡು ಮಾತನಾಡಿ, ಹಂಪನಹಳ್ಳಿ ತಿಮ್ಮೇಗೌಡರು ಜನಪದ ಹಾಗೂ ಸಾಹಿತ್ಯ ಕ್ಷೇತ್ರಕ್ಕೆ ನೀಡಿದ ಕೊಡುಗೆ ಅಪಾರವಾಗಿದೆ. ಅವರಿಗೆ ಲಭಿಸಿದ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಇಡೀ ಜಿಲ್ಲೆಗೆ ಗೌರವ ತಂದಿದೆ ಎಂದರು. ಇಂತಹ ಸಾಧಕರನ್ನು ಗೌರವಿಸುವುದು ನಮ್ಮ ಕರ್ತವ್ಯವೆಂದು ತಿಳಿಸಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಹಂಪನಹಳ್ಳಿ ತಿಮ್ಮೇಗೌಡರು, ಗ್ರಾಮೀಣ ಭಾಗದಿಂದ ಬಂದ ನಾನು ಯಾವುದೇ ವಿಶೇಷ ಪ್ರೋತ್ಸಾಹವಿಲ್ಲದೆ ಶಿಕ್ಷಣದತ್ತ ಮುಖ ಮಾಡಿ ಶಿಕ್ಷಕನಾದೆ. ನಂತರ ಅಧ್ಯಯನದ ಆಸಕ್ತಿಯಿಂದ ಸಾಹಿತ್ಯ ಕ್ಷೇತ್ರದತ್ತ ಒಲವು ಬೆಳೆಯಿತು ಎಂದು ತಮ್ಮ ಜೀವನ ಪಯಣವನ್ನು ಹಂಚಿಕೊಂಡರು.

ನನ್ನ ದಾಸ ಒಕ್ಕಲಿಗ ಕೃತಿ ಯಾವುದೇ ಒಂದು ಜಾತಿಗೆ ಸೀಮಿತವಲ್ಲ. ಅದರ ಒಳಪಂಗಡದ ಸಂಸ್ಕೃತಿ ಮತ್ತು ಪರಂಪರೆಯ ಅಧ್ಯಯನದ ಪ್ರತೀಕವಾಗಿದೆ. ಈ ಕೃತಿಯನ್ನು ಆದಿಚುಂಚನಗಿರಿ ಮಠದ ವಿಶ್ವವಿದ್ಯಾನಿಲಯದ ಪ್ರೇರಣೆಯಿಂದ ಕಡಿಮೆ ಅವಧಿಯಲ್ಲಿ ಸಿದ್ಧಪಡಿಸಿದ್ದೆ. ಇದೀಗ ಅದಕ್ಕೆ ಗೌರವ ದೊರೆತಿರುವುದು ಸಂತೋಷ ತಂದಿದೆ ಎಂದು ಹೇಳಿದರು.

ಲೇಖಕ ಚಿನ್ನೇನಹಳ್ಳಿ ಸ್ವಾಮಿ, ಬಸವ ಕೇಂದ್ರದ ಅಧ್ಯಕ್ಷ ಬಸವರಾಜ, ಮಲೆನಾಡು ತಾಂತ್ರಿಕ ಶಿಕ್ಷಣ ಸಂಸ್ಥೆಯ ಉಪನ್ಯಾಸಕ ಪ್ರೊ. ಜಿ. ಮಂಜುನಾಥ್, ಬನವಾಸಿ ರುದ್ರಪ್ಪ, ಎವಿಕೆ ಕಾಲೇಜಿನ ನಿವೃತ್ತ ಉಪನ್ಯಾಸಕ ಚನ್ನರಾಯಪಟ್ಟಣ ಪ್ರಕಾಶ್, ಶಿಕ್ಷಕ ಸೋಮಶೇಖರ್ ಇತರರಿದ್ದರು.

## ಪಕ್ಷಕ್ಕಿಂತ ದೇಶ ಮುಖ್ಯ ಎಂಬುದು ಬಿಜೆಪಿ ಧ್ಯೇಯ: ನವಿಲೆ ಅಣ್ಣಪ್ಪ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ಭಾರತೀಯ ಜನತಾ ಪಾರ್ಟಿಯು ರಾಷ್ಟ್ರವಾದಿ ಚಿಂತನೆಯಿಂದ ರೂಪುಗೊಂಡ ಪಕ್ಷವಾಗಿದ್ದು, ಪಂಡಿತ್ ದೀನ್ ದಯಾಳ್ ಉಪಾಧ್ಯಾಯರ ಅಧ್ಯಕ್ಷತೆಯಿಂದ ಪ್ರಾರಂಭವಾಗಿ ಡಾ.ಶ್ಯಾಮಪ್ರಸಾದ್ ಮುಖರ್ಜಿ ಅವರ ನೇತೃತ್ವದಿಂದ ನಿರ್ಮಾಣಗೊಂಡಿದೆ.

ಪಕ್ಷದಲ್ಲಿ ವ್ಯಕ್ತಿಗಿಂತ ದೇಶ ಮುಖ್ಯ ಎಂಬ ಸಿದ್ಧಾಂತ ಇದ್ದು, ಇತರೆ ರಾಜಕೀಯ ಪಕ್ಷಗಳಿಂದ ವಿಭಿನ್ನವಾಗಿದೆ ಎಂದು ಬಿಜೆಪಿ ರಾಷ್ಟ್ರೀಯ ಕಾರ್ಯಕಾರಿಣಿ ಸದಸ್ಯ ನವಿಲೆ ಅಣ್ಣಪ್ಪ ತಿಳಿಸಿದರು.

ಬಿಜೆಪಿ ಜಿಲ್ಲಾ ಕಚೇರಿಯಲ್ಲಿ ಆಯೋಜಿಸಿದ್ದ 46ನೇ ಬಿಜೆಪಿ ಸಂಸ್ಥಾಪನಾ ದಿನ ಉದ್ದೇಶಿಸಿ ಮಾತನಾಡಿ, ಬಿಜೆಪಿ ರೂಪುಗೊಳ್ಳುವ ಪೂರ್ವದಲ್ಲಿದ್ದ ಜನಸಂಘದ ಪ್ರಾರಂಭ ಹಾಗೂ ಬೆಳವಣಿಗೆಯ ಪ್ರಮುಖ ವಿದ್ಯಮಾನ ತಿಳಿಸಿದರು.

ಬಿಜೆಪಿ ರಾಜ್ಯ ಒಬಿಸಿ ಪ್ರಧಾನ ಕಾರ್ಯದರ್ಶಿ ಪ್ರಸನ್ನ ಕುಮಾರ್ ಮಾತನಾಡಿ, ಪಂಡಿತ್ ದೀನ್ ದಯಾಳ ಉಪಾಧ್ಯಾಯರು ಹಾಗೂ ಡಾ.ಶ್ಯಾಮಪ್ರಸಾದ್ ಮುಖರ್ಜಿ ಅವರ ಬಲಿದಾನವನ್ನು ಬಿಜೆಪಿ ಕಾರ್ಯಕರ್ತರು ನೆನಪಿನಲ್ಲಿಡಬೇಕು. ಬಿಜೆಪಿ ಕಾರ್ಯಕರ್ತರು ರಾಷ್ಟ್ರವಾದ, ಸಂವಿಧಾನ, ಸಾಮಾಜಿಕ ಸಾಮರಸ್ಯ, ಕೌಟುಂಬಿಕ ಭಾವನೆ, ಪರಿಸರ ಎಂಬ ಪಂಚ ಉದ್ದೇಶಗಳ ಈಡೇರಿಕೆಗಾಗಿ ಶ್ರಮಿಸಬೇಕು. ಕೇವಲ ಚುನಾವಣೆ ಗೆಲ್ಲಲು ರಣತಂತ್ರ ಹೂಡುವುದು ಬಿಜೆಪಿ ಗುರಿಯಲ್ಲ. ಬದಲಿಗೆ ಪ್ರತಿದಿನವೂ ಉದ್ದೇಶದ ಈಡೇರಿಕೆಗೆ ಶ್ರಮಿಸುವ ಸೈನಿಕರಾಗಿರಬೇಕು ಎಂದು ಕರೆ ನೀಡಿದರು.

ಸಭೆಯಲ್ಲಿ ಹಿರಿಯ ಕಾರ್ಯಕರ್ತರಾದ ಪ್ರೇಮಣ್ಣ ಹಾಗೂ ನವಿಲೆ ಅಣ್ಣಪ್ಪ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ರಾಜ್ಯ ಕಾರ್ಯಕಾರಿಣಿ ಸದಸ್ಯರಾದ ಪ್ರಕಾಶ್, ಜಿಲ್ಲಾ ಉಪಾಧ್ಯಕ್ಷ ಎ.ಡಿ.ಚಂದ್ರಶೇಖರ್, ಜಿಲ್ಲಾ ಮಾಧ್ಯಮ ಪ್ರಮುಖ್ ಬಿ.ವೇದಾವತಿ, ಜಿಲ್ಲಾ ಕಾರ್ಯದರ್ಶಿ ಛಾಯಾ ಕೃಷ್ಣ, ರೈತಮೋರ್ಚಾ ಅಧ್ಯಕ್ಷ ನಾರಾಯಣಗೌಡ, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಅಮಿತ್ ಶೆಟ್ಟಿ, ಗಿರೀಶ್ ನಂಬೀಹಳ್ಳಿ, ನಗರಾಧ್ಯಕ್ಷ ಯೋಗೀಶ್ ಮಂಜಣ್ಣ, ಕಂಚಮಾರನಹಳ್ಳಿ ಕಾಂತರಾಜ್ ಮೊದಲಾದವರಿದ್ದರು.

## ರಕ್ತಪಾತದಿಂದ ಶಾಂತಿಗೆ ಭಂಗ ಯುದ್ಧ ನಿಲ್ಲಿಸಲು ಮನವಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ಮಧ್ಯಪ್ರಾಚ್ಯದಲ್ಲಿ ನಡೆಯುತ್ತಿರುವ ರಕ್ತಪಾತ ಸಂಘರ್ಷ ದಿನದಿಂದ ದಿನಕ್ಕೆ ತೀವ್ರಗೊಳ್ಳುತ್ತಿದ್ದು, ಇದರಿಂದ ಅಮಾಯಕರ ಜೀವಹಾನಿ ಹೆಚ್ಚುತ್ತಿರುವುದು ಅತ್ಯಂತ ಆತಂಕಕಾರಿ ಬೆಳವಣಿಗೆಯಾಗಿದೆ ಎಂದು ಕಳವಳ ವ್ಯಕ್ತಪಡಿಸಿದ ನಿವೃತ್ತ ಪೊಲೀಸ್ ಸಿಬ್ಬಂದಿ ಹಾಗೂ ಅಂತಾರಾಷ್ಟ್ರೀಯ ಕ್ರೀಡಾಪಟು ಪುರುಷೋತ್ತಮ್, ಕೂಡಲೇ ಯುದ್ಧ ನಿಲ್ಲಿಸಬೇಕು ಎಂದು ಒತ್ತಾಯಿಸಿದರು.

ಸುದ್ದಿಗೋಷ್ಟಿಯಲ್ಲಿ ಸೋಮವಾರ ಮಾತನಾಡಿ, ಯುದ್ಧದ ಆರಂಭದಲ್ಲೇ ಜಿಲ್ಲಾಧಿಕಾರಿ ಅವರನ್ನು ಭೇಟಿ ಮಾಡಿ ಸಂಕಷ್ಟದಲ್ಲಿರುವ ಅಮಾಯಕರನ್ನು ರಕ್ಷಿಸುವುದು ಹಾಗೂ ಒತ್ತೆಯಾಳುಗಳ ಸುರಕ್ಷಿತ ಬಿಡುಗಡೆಗಾಗಿ ಕೇಂದ್ರ ಸರ್ಕಾರದ ಮೂಲಕ ಅಂತಾರಾಷ್ಟ್ರೀಯ ಮಟ್ಟದಲ್ಲಿ ಕ್ರಮ ಕೈಗೊಳ್ಳುವಂತೆ ಮನವಿ ಸಲ್ಲಿಸಿದ್ದೆ ಎಂದರು.

ಆದರೆ ಈ ವಿಷಯ ಅಂತಾರಾಷ್ಟ್ರೀಯ ವ್ಯಾಪ್ತಿಗೆ ಸೇರಿದ್ದರಿಂದ ಸ್ಥಳೀಯ ಮಟ್ಟದಲ್ಲಿ ಯಾವುದೇ ಕ್ರಮ ಕೈಗೊಳ್ಳಲು ಸಾಧ್ಯವಿಲ್ಲವೆಂದು ಅಧಿಕಾರಿಗಳು ತಿಳಿಸಿದರು. ಆದರೀಗ ಸಂಘರ್ಷ 2ನೇ ತಿಂಗಳಿಗೆ ಕಾಲಿಟ್ಟಿದ್ದು, ನಿರಪರಾಧಿ ನಾಗರಿಕರ ಮೇಲೆ ನಿರಂತರ ದಾಳಿ ನಡೆಯುತ್ತಿದೆ. ಬಾಂಬ್ ದಾಳಿ, ಹಿಂಸಾಚಾರ ಮತ್ತು ಮಾನವ ಹಕ್ಕುಗಳ ಉಲ್ಲಂಘನೆ ಹೆಚ್ಚುತ್ತಿರುವುದು ಕಂಡುಬರುತ್ತಿದೆ. ಮಹಿಳೆಯರು, ಮಕ್ಕಳು ಹಾಗೂ ವೃದ್ಧರು ಸೇರಿ ಸಾಮಾನ್ಯ ಜನ ಅತ್ಯಂತ ಸಂಕಷ್ಟದ ಪರಿಸ್ಥಿತಿ ಎದುರಿಸುತ್ತಿದ್ದು, ತಕ್ಷಣವೇ ಹಿಂಸಾಚಾರಕ್ಕೆ ಅಂತ್ಯ ಹಾಡಲು ಜಾಗತಿಕ ಸಮುದಾಯ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಯುದ್ಧ ನಿರತ ರಾಷ್ಟ್ರಗಳ ನಾಯಕರು, ಉಗ್ರ ಮನೋಭಾವ ತ್ಯಜಿಸಿ, ಸಂವಾದ ಮೂಲಕ ಸಮಸ್ಯೆಗೆ ಶಾಂತಿಯುತ ಪರಿಹಾರ ಕಂಡುಕೊಳ್ಳಬೇಕಾಗಿದೆ. ಶಸ್ತ್ರಾಸ್ತ್ರ ಬಳಕೆ ನಿಲ್ಲಿಸಿ,

ಮಾನವೀಯ ಮೌಲ್ಯಗಳಿಗೆ ಆದ್ಯತೆ ಕೊಡಬೇಕಿದೆ ಎಂದು ಮನವಿ ಮಾಡಿದರು. ವಿವಿಧ ಧರ್ಮಗಳ ಸಜ್ಜನರು, ಧಾರ್ಮಿಕ ನಾಯಕರು ಹಾಗೂ ಸಮಾಜಮುಖಿ ಸಂಘಟನೆಗಳು

ಒಗ್ಗೂಡಿ ಶಾಂತಿ ಮತ್ತು ಸಹಬಾಳ್ವೆ ಸಂದೇಶವನ್ನು ವಿಶ್ವದಾದ್ಯಂತ ಹಬ್ಬಿಸಬೇಕಾಗಿದೆ. ಪರಸ್ಪರ ಗೌರವ, ಸಹಿಷ್ಣುತೆ ಮತ್ತು ಮಾನವೀಯತೆಯಿಂದ ಶಾಂತಿ ಸ್ಥಾಪಿಸಬೇಕಿದೆ ಎಂದು ಹೇಳಿದರು.

## ಆಲೂರಿನಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗೆ ಚಾಲನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಆಲೂರು: ಪಟ್ಟಣ ಪಂಚಾಯಿತಿ ವ್ಯಾಪ್ತಿಗೊಳಪಡುವ ವಿವಿಧ ವಾರ್ಡ್‌ಗಳಲ್ಲಿ 70 ಲಕ್ಷ ರೂ. ವೆಚ್ಚದಲ್ಲಿ ರಸ್ತೆ, ಚರಂಡಿ ಕಾಮಗಾರಿ ಕೈಗೆತ್ತಿಕೊಳ್ಳಲಾಗುವುದು ಎಂದು ಶಾಸಕ ಸಿಮೆಂಟ್ ಮಂಜು ತಿಳಿಸಿದರು.

ಪಟ್ಟಣದ 4ನೇ ವಾರ್ಡ್‌ನಲ್ಲಿ ಚರಂಡಿ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿ, ಪುರಸಭಾ ಕಾರ್ಯಾಲಯದ ಪಕ್ಕದಿಂದ ದೊಡ್ಡಿ ಬೀದಿ ಮುಖಾಂತರ ಪ್ರಕೃತಿ ನಗರ ರಸ್ತೆ ಅಭಿವೃದ್ಧಿ, 4ನೇ ವಾರ್ಡ್ ಸುಣ್ಣದ ಬೀದಿ ರಸ್ತೆ, ವಾಡ್ 1 ಮತ್ತು 2ರಲ್ಲಿ ಕಾಂಕ್ರೀಟ್ ರಸ್ತೆ ಕಾಮಗಾರಿ, ವಾರ್ಡ್ ನಂ. 3 ರಲ್ಲಿ ಡಾಂಬರೀಕರಣ ರಸ್ತೆ ಅಭಿವೃದ್ಧಿ ಕಾಮಗಾರಿ, 11 ರಲ್ಲಿ ಸಿ. ಸಿ. ರಸ್ತೆ ಅಭಿವೃದ್ಧಿ ಕಾಮಗಾರಿ, 11 ರಲ್ಲಿ ಸಿ.ಸಿ. ರಸ್ತೆ ಅಭಿವೃದ್ಧಿ ಕಾಮಗಾರಿ, 9 ರಲ್ಲಿ ಹಳೆ ಸಂತೆ ಬೀದಿ ರಸ್ತೆ ಕಾಮಗಾರಿ, ಬಿ. ಎಂ. ರಸ್ತೆ ಸರ್ಕಾರಿ ಆಸ್ಪತ್ರೆ ಹತ್ತಿರ ಚರಂಡಿಗಳಿಗೆ ಕವರಿಂಗ್ ಸ್ಲ್ಯಾಬ್ ನಿರ್ಮಾಣ ಮತ್ತು ವಾರ್ಡು ನಂ. 10 ರಲ್ಲಿ ರಸ್ತೆಗೆ ಮರು ಡಾಂಬರೀಕರಣ ಕಾಮಗಾರಿ ಕೈಗೆತ್ತಿಕೊಳ್ಳಲಾಗುವುದು ಎಂದರು.

ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಮಂಜುನಾಥ್, ಸ್ಥಳೀಯ ಮುಖಂಡರು ಮತ್ತು ಅಧಿಕಾರಿಗಳು ಹಾಜರಿದ್ದರು.



# ಮೂಲವ್ಯಾಧಿ ಸಮಸ್ಯೆಯನ್ನು ಹಗುರವಾಗಿ ಪರಿಗಣಿಸಬೇಡಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮೂಲವ್ಯಾಧಿ ಪರಿಹಾರ ಕಂಡುಕೊಳ್ಳಬಹುದಾದ ಸಮಸ್ಯೆಯಾದರೂ ಸಹ ರೋಗಿಗಳು ನಾಚಿಕೆ, ಚಿಕಿತ್ಸೆಗೆ ಉದಾಸೀನ ತೋರುವುದರಿಂದ ಅಪಾಯಕ್ಕೆ ಆಹ್ವಾನ ನೀಡುತ್ತಾರೆ ಎಂದು ಸ್ಮೈಲ್ಸ್ ಇನ್ಸ್ಟಿಟ್ಯೂಟ್ ಆಫ್ ಗ್ಯಾಸ್ಟ್ರೋ ಎಂಟೆರೊಲೊಜಿ ಆಸ್ಪತ್ರೆ ಮುಖ್ಯಸ್ಥ ಡಾ. ಪರಮೇಶ್ವರ್ ಅಭಿಪ್ರಾಯಪಟ್ಟರು.

ನಗರದ ಎ.ವಿ.ಕಾಂತಮ್ಮ ಮಹಿಳಾ ಕಾಲೇಜಿನಲ್ಲಿ ಆಯೋಜಿಸಿದ್ದ ಪೈಲ್ಸ್, ಫಿಷರ್, ಫಿಸ್ತುಲಾ ಅಥವಾ ಕರುಳಿನ ಕ್ಯಾನ್ಸರ್ ಉಚಿತ ತಪಾಸಣಾ ಶಿಬಿರದಲ್ಲಿ ಮಾತನಾಡಿದ ಅವರು, ಆರೋಗ್ಯಕ್ಕೆ ಆದ್ಯತೆ ನೀಡದೆ ಇದ್ದರೆ ಗಂಭೀರ ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆ. ದೇಹಕ್ಕೆ ನೀರು, ನಾರು ಪದಾರ್ಥ, ನಿದ್ರೆ ಹಾಗು ದೈಹಿಕ ವ್ಯಾಯಾಮ ಅತ್ಯವಶ್ಯಕವಾಗಿದೆ. 60ಕ್ಕಿಂತ ಅಧಿಕ ತೂಕ ಹೊಂದಿರುವ ವ್ಯಕ್ತಿ ದಿನಕ್ಕೆ 3 ಲೀಟರ್ ಹಾಗೂ ಅದಕ್ಕಿಂತ ಕಡಿಮೆ ತೂಕದವರು 2 ಲೀಟರ್ ನೀರನ್ನು ಕಡ್ಡಾಯವಾಗಿ ಕುಡಿಯಬೇಕು. ಬೇಸಿಗೆಯಲ್ಲಿ ದೇಹಕ್ಕೆ ನೀರಿನ ಅವಶ್ಯಕತೆ ಹೆಚ್ಚಿರುತ್ತದೆ ಎಂದು ಹೇಳಿದರು.

ದೇಶದ ಶೇ. 36 ರಷ್ಟು ಜನರು ಮೂಲವ್ಯಾಧಿ ಹಾಗು ಶೇ. 15ರಷ್ಟು ಜನರು ಮಲಬದ್ಧತೆ ಸಮಸ್ಯೆಯಿಂದ ಬಳಲುತ್ತಿದ್ದಾರೆ. ದೇಹದ ಗುಪ್ತ ಸ್ಥಳಗಳಲ್ಲಿ ಈ ಸಮಸ್ಯೆ ಕಾಣಿಸಿಕೊಳ್ಳುವುದರಿಂದ ಬಹುತೇಕರು ಆರಂಭದ ಒಂಬತ್ತು ವರ್ಷಗಳ ಕಾಲ ತಮಗೆ ಈ ರೀತಿಯ ಸಮಸ್ಯೆ ಇರುವುದನ್ನು ಹೇಳುವುದಿಲ್ಲ. ಆ ಬಳಿಕ ನಾಟಿ ಔಷಧಿಗಳ ಮೊರೆ ಹೋಗುತ್ತಾರೆ. ಹೀಗಾಗಿ ಚಿಕ್ಕ ಸಮಸ್ಯೆಯನ್ನು ತಾವೇ ದೊಡ್ಡದು ಮಾಡಿಕೊಳ್ಳುತ್ತಾರೆ. ನಾಚಿಕೆ, ಸಂಕೋಚ ಮನೋಭಾವದಿಂದ ಹೊರಬರದಿದ್ದರೆ ಚಿಕಿತ್ಸೆಗಾಗಿ ಲಕ್ಷಾಂತರ ರೂಪಾಯಿ ಖರ್ಚು ಮಾಡಬೇಕಾಗುತ್ತದೆಂದು ಎಚ್ಚರಿಕೆ ನೀಡಿದರು.

## ದೇಶದಲ್ಲಿ 15 ಲಕ್ಷ ನಕಲಿ ವೈದ್ಯರು:

ಮೂಲವ್ಯಾಧಿ ಸಮಸ್ಯೆಗೆ ಚಿಕಿತ್ಸೆ ನೀಡುವ ಉದ್ದೇಶದಿಂದ ಹುಟ್ಟಿಕೊಂಡಿರುವ 15 ಲಕ್ಷ ನಕಲಿ ವೈದ್ಯರು ದೇಶದಲ್ಲಿದ್ದಾರೆಂಬ ವರದಿ ಪ್ರಕಟವಾಗಿದೆ. ಸಾರ್ವಜನಿಕರು ಈ ಬಗ್ಗೆಯೂ ಚಿಂತನೆ ನಡೆಸಬೇಕಾಗುತ್ತದೆ. ಆದ್ದರಿಂದಲೇ ನಮ್ಮ ಸಂಸ್ಥೆ ರಾಜ್ಯದ ಪ್ರತಿ ತಾಲ್ಲೂಕಿನಲ್ಲಿ ಒಂದು ಕ್ಲಿನಿಕ್ ಪ್ರಾರಂಭಿಸುವ ಯೋಜನೆ ಹಾಕಿಕೊಂಡಿದೆ. ನುರಿತ ತಜ್ಞ ವೈದ್ಯರು ತಾಲ್ಲೂಕು ಕೇಂದ್ರಗಳಲ್ಲಿ ಸಿಕ್ಕರೆ ಆಗ ನಕಲಿ ವೈದ್ಯರ ಹಾವಳಿ ಕಡಿಮೆಯಾಗುತ್ತದೆ. ರಾಜ್ಯದ ಏಳು ಜಿಲ್ಲೆಗಳಲ್ಲಿ ಆಸ್ಪತ್ರೆಗಳನ್ನು ಮುಂದಿನ ಎರಡು ವರ್ಷದಲ್ಲಿ ಪ್ರಾರಂಭಿಸುತ್ತೇವೆಂದು ಭರವಸೆ ನೀಡಿದರು.

ಮೂಲವ್ಯಾಧಿ ಎಂದರೆ ಕೇವಲ ರಕ್ತಸ್ರಾವ ಮಾತ್ರವಲ್ಲ. ನಾನಾ ಬಗೆಯ ಖಾಯಿಲೆಗಳಿದ್ದು ಅದಕ್ಕೆ ಸೂಕ್ತ ಚಿಕಿತ್ಸೆಯ ಅತ್ಯವಶ್ಯವಿದೆ. ದೀರ್ಘಕಾಲದಿಂದ ಆರೋಗ್ಯದಲ್ಲಿ ಸಮಸ್ಯೆಯಿದ್ದರೆ ಅದು ಕೋಲೊರೆಕ್ಟಲ್ ಎಂಬ ಕ್ಯಾನ್ಸರ್‌ಗೆ ಎಡೆಮಾಡಿಕೊಡುತ್ತದೆ. ಪ್ರತಿ 100 ಪೈಲ್ಸ್ ರೋಗಿಗಳಲ್ಲಿ 78 ಜನರಿಗೆ ಈ ಸಮಸ್ಯೆಯಾಗುವ ಸಾಧ್ಯತೆಯಿದೆ. ಜೀವನಪೂರ್ತಿ ರೋಗಿಗಳಲು ಪ್ರಯಾಸಪಡಬೇಕಾಗುತ್ತದೆ. ಆದ್ದರಿಂದ ನಿರ್ಲಕ್ಷ್ಯ ವಹಿಸದೆ ಆರಂಭದಲ್ಲೇ ಚಿಕಿತ್ಸೆ ಪಡೆಯುವುದು ಸೂಕ್ತ. ನಮ್ಮ ಜೀವನ ಪದ್ಧತಿಯನ್ನು ಸಂಪೂರ್ಣ ಬದಲಾಯಿಸಿಕೊಳ್ಳಬೇಕು. ಮಕ್ಕಳಿಗೆ ಪೌಷ್ಟಿಕಾಂಶ ಯುಕ್ತ ಆಹಾರ ನೀಡುವುದನ್ನು ಅಳವಡಿಸಿಕೊಳ್ಳಬೇಕೆಂದು ಅವರು ಸಲಹೆ ನೀಡಿದರು.

ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಜೆ.ಆರ್. ಕೆಂಚೇಗೌಡ ಮಾತನಾಡಿ, ಮೂಲವ್ಯಾಧಿ ಸಮಸ್ಯೆ ಎಂದರೆ ನಾಟಿ ವೈದ್ಯರನ್ನು ಕಾಣುವುದೇ ಪರಿಹಾರವೆಂಬ ಮನಸ್ಥಿತಿ ಗ್ರಾಮೀಣ ಜನರಲ್ಲಿ ಇದೆ. ತಿಳಿವಳಿಕೆ ಕೊರತೆಯಿಂದ ಇಂದಿಗೂ ಅನೇಕರು ತೊಂದರೆ ಅನುಭವಿಸುತ್ತಿದ್ದಾರೆ. ತಾತ್ಕಾಲಿಕವಾಗಿ ರೋಗ ಶಮನ ಮಾಡಿಕೊಳ್ಳಲು ದೀರ್ಘಕಾಲದ ಸಮಸ್ಯೆ ಎದುರಿಸುತ್ತಿದ್ದಾರೆ. ಇಂತಹ ಕಾರ್ಯಕ್ರಮಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಬೇಕೆಂದು ಆಶಿಸಿದರು.

ಪತ್ರಕರ್ತರ ಸಂಘದ ಮಾಜಿ ಜಿಲ್ಲಾಧ್ಯಕ್ಷ ರವಿ ನಾಕಲಗೂಡು ಮಾತನಾಡಿ, ಮೂಲವ್ಯಾಧಿ ಸಮಸ್ಯೆಗೆ ಚಿಕಿತ್ಸೆ ಹಾಗು ಸಲಹೆ ನೀಡಲು ಜಿಲ್ಲೆಗೆ ನುರಿತ ತಜ್ಞರು ಬಂದಿರುವುದು ಹೆಮ್ಮೆಯ ವಿಚಾರ. ಮನುಷ್ಯ ಆರೋಗ್ಯಕ್ಕೆ ಆದ್ಯತೆ ನೀಡಬೇಕು. ಆಹಾರ ಪದ್ಧತಿಯಲ್ಲಿ ಬದಲಾವಣೆ ಮಾಡಿಕೊಳ್ಳಬೇಕೆಂದರು.

ಪತ್ರಕರ್ತ ಆರ್.ಪಿ.ವೆಂಕಟೇಶ್‌ಮೂರ್ತಿ, ಜಿಲ್ಲಾ ಬ್ಯಾಂಕ್ ನೌಕರರ ಸಂಘದ ಮಾಜಿ ಅಧ್ಯಕ್ಷ ಪರಮಶಿವಯ್ಯ, ನಾಜಿಯಾ, ಕಾಮರ್ಸ್ ಚೇಂಬರ್ ಮಾಜಿ ಜಿಲ್ಲಾಧ್ಯಕ್ಷ ಚಂದ್ರಶೇಖರ್ ಮಾತನಾಡಿದರು. ಕಸಾಪ ಮಾಜಿ ಜಿಲ್ಲಾಧ್ಯಕ್ಷ ಉದಯರವಿ, ಡಾ. ವಿಜಯ್, ಡಾ. ವೆಂಕಟೇಶ್ ಮತ್ತಿತರರಿದ್ದರು. ಶಿಬಿರದಲ್ಲಿ ಭಾಗವಹಿಸಿದ್ದ 100ಕ್ಕೂ ಹೆಚ್ಚು ಜನರಿಗೆ ಆರೋಗ್ಯ ತಪಾಸಣೆ ನಡೆಸಲಾಯಿತು.

# ಅನುದಾನ ಲಭ್ಯತೆ ಆಧರಿಸಿ ಪ್ರೇಕ್ಷಕರ ಗ್ಯಾಲರಿಗೆ ಕ್ರಮ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಮುಂದಿನ ಆರ್ಥಿಕ ವರ್ಷದಲ್ಲಿ ಅನುದಾನದ ಲಭ್ಯತೆ ಆಧರಿಸಿ ತಾಲ್ಲೂಕು ಕ್ರೀಡಾಂಗಣದಲ್ಲಿ ಪ್ರೇಕ್ಷಕರ ಗ್ಯಾಲರಿ ನಿರ್ಮಾಣ ಮಾಡಲಾಗುವುದು ಎಂದು ಶಾಸಕ ಸಿ.ಎನ್.ಬಾಲಕೃಷ್ಣ ತಿಳಿಸಿದರು.

ಪಟ್ಟಣದ ತಾಲ್ಲೂಕು ಕ್ರೀಡಾಂಗಣದಲ್ಲಿ ಭಾನುವಾರ ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅನುದಾನದಲ್ಲಿ ಅಭಿವೃದ್ಧಿ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದ ಅವರು, ಸ್ಥಳೀಯ ಕ್ರೀಡಾಪಟುಗಳಿಗೆ ವೇದಿಕೆ ಸೃಷ್ಟಿಸುವುದು ನಮ್ಮ ಜವಾಬ್ದಾರಿ. ಪೆವಿಲಿಯನ್, ಕೊಠಡಿ ಹಾಗೂ ಪ್ರತ್ಯೇಕ ಶೌಚಾಲಯ ಸೇರಿ ಕ್ರೀಡಾಂಗಣಕ್ಕೆ ಅಗತ್ಯವಿರುವ ಮೂಲ ಸೌಕರ್ಯಗಳನ್ನು ಒದಗಿಸಲಾಗಿದೆ. ಕ್ರೀಡಾಂಗಣದ ಮತ್ತಷ್ಟು ಅಭಿವೃದ್ಧಿಗೆಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ 1 ಕೋಟಿ ರೂ. ಅನುದಾನ ಬಿಡುಗಡೆಯಾಗಿದ್ದು ವಾಲಿಬಾಲ್, ಕಬಡ್ಡಿ, ಖೋ ಖೋ, ಎತ್ತರ ಜಿಗಿತ, ಉದ್ದ ಜಿಗಿತ ಅಂಕಣ, ಕುಡಿಯುವ ನೀರಿನ ವ್ಯವಸ್ಥೆಗೆ ಸಂಪ್ ನಿರ್ಮಾಣ ಹಾಗು ಒಳಚರಂಡಿ ವ್ಯವಸ್ಥೆ ಕೈಗೊಳ್ಳಲಾಗುವುದು. ಕ್ರೀಡಾಂಗಣ ಸುತ್ತಲು ಚೈನ್ ಲಿಂಕ್ ಪೆನ್ಸಿಂಗ್ ವ್ಯವಸ್ಥೆ ಮಾಡಿ ಕ್ರೀಡಾಭಿಮಾನಿಗಳಿಗೆ ನಿರಾಸೆ ಮೂಡದ ಹಾಗೆ ಅಭಿವೃದ್ಧಿ ಕಾಮಗಾರಿ ಕೈಗೊಳ್ಳಲಾಗುವುದೆಂದು ತಿಳಿಸಿದರು.

# ಆದಿಹಳ್ಳಿಯಲ್ಲಿ ಮಹಾಲಕ್ಷ್ಮಿ ಜಾತ್ರಾ ಮಹೋತ್ಸವ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ಆದಿಶಕ್ತಿ ಮಹಾಲಕ್ಷ್ಮಿ ದೇವಿ ಕೈಯಲ್ಲಿ ಹಿಡಿದಿರುವ ಶಂಖ ಚಕ್ರ ಮತ್ತು ಗದೆ ಬ್ರಹ್ಮಾಂಡದ ಸೃಷ್ಟಿ ಸ್ಥಿತಿ ಮತ್ತು ಲಯದ ಸಂಕೇತವಾಗಿದೆ ಎಂದು ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷ ಡಾ. ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಹೇಳಿದರು.

ತಾಲ್ಲೂಕಿನ ಆದಿಹಳ್ಳಿ ಆದಿಚುಂಚನಗಿರಿ ಶಾಖಾ ಮಠದ ಆದಿಲಕ್ಷ್ಮಿ ಅಮ್ಮನವರ ಜಾತ್ರಾ ಮಹೋತ್ಸವ ಹಾಗೂ 139ನೇ ಗುರು ತೋರಿದ ದಾರಿ ತಿಂಗಳ ಮಾಮನ ತೇರು ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದ ಅವರು, ನಮಸ್ತೆ ಮಹಾಮಾಯೇ ಶ್ರೀ ಪೀಠ ಸುರಪೂಜಿತೆ ಶಂಕಚಕ್ರ ಗದ ಅಸ್ತೆ ಮಹಾಲಕ್ಷ್ಮಿ ನಮೋಸ್ತುತೆ ಇದು ಮಹಾಲಕ್ಷ್ಮಿಯನ್ನು ಆರಾಧಿಸುವ ಶ್ಲೋಕ ಮಾತ್ರವಲ್ಲ. ಅದರಲ್ಲಿ ಬ್ರಹ್ಮಾಂಡದ ರಹಸ್ಯ ಅಡಗಿದೆ ಎಂದರು.

ಶಂಖದ ನಾದದಿಂದ ಹೊರ ಹೊಮ್ಮುವ ಶಬ್ದದಿಂದ ಬ್ರಹ್ಮಾಂಡ ಸೃಷ್ಟಿಯಾಗಿದ್ದರೆ ಚಲಿಸುತ್ತಿರುವ ಕಾಲವು ದೇವಿಯ ಕೈ ಬೆರಳಿನಲ್ಲಿ ತಿರುಗುತ್ತಿರುವ ಚಕ್ರವಾಗಿದೆ. ಅಧರ್ಮ ಹೆಚ್ಚಾದಾಗ ದೇವಿಯ ಮತ್ತೊಂದು ಕೈಯಲ್ಲಿರುವ ಗದೆಯು ಪ್ರಹಾರದ ಮೂಲಕ ಜಗತ್ತಿನಲ್ಲಿ ಧರ್ಮ ಸಂಸ್ಥಾಪನೆ ಮಾಡುತ್ತದೆ. ದೇವಿಯ ಮೂರು ಕೈಗಳಲ್ಲಿ ಮೂರು ಆಯುಧಗಳಿದ್ದರೂ ಮತ್ತೊಂದು ಕೈ ಭಕ್ತರ ಪಾಲಿನ ಅಭಯ ಹಸ್ತವಾಗಿದೆ. ಸಾಕ್ಷಾತ್ ಮಹಾಲಕ್ಷ್ಮಿ ಆದಿಹಳ್ಳಿ ಗ್ರಾಮದಲ್ಲಿ ನೆಲೆಸಿ ಎಲ್ಲರನ್ನೂ ಕಾಪಾಡುತ್ತಿದ್ದಾಳೆ ಎಂದರು.

ಆದಿಚುಂಚನಗಿರಿ ಹಾಸನ ಶಾಖಾ ಮಠದ ಶ್ರೀ ಶಂಭುನಾಥ ಸ್ವಾಮೀಜಿ ಮಾತನಾಡಿ, ಗ್ರಾಮದ ಅಧಿದೇವತೆ ಆದಿಲಕ್ಷ್ಮಿ ದೇವಿಯ ಅನುಗ್ರಹ ಹಾಗು ಭೈರವೈಕ್ಯ ಡಾ. ಬಾಲಗಂಗಾಧರನಾಥ ಸ್ವಾಮೀಜಿ ಅವರ ಸಂಕಲ್ಪದಂತೆ ಆದಿಹಳ್ಳಿ ಗ್ರಾಮವು ನಾಡಿನ ಸುಕ್ಷೇತ್ರಗಳಲ್ಲಿ ಒಂದಾಗಿ ಬೆಳಗುತ್ತಿದ್ದು ಶ್ರೀಮಠದ ವತಿಯಿಂದ ಆದಿಹಳ್ಳಿ ಶಾಖಾ ಮಠದಲ್ಲಿ ಸಮಾಜಮುಖಿಯಾಗಿ ಹತ್ತಾರು ಕಾರ್ಯಕ್ರಮಗಳನ್ನು ರೂಪಿಸಲಾಗುತ್ತಿದೆ. ಮೊದಲ ಹಂತವಾಗಿ 1 ಕೋಟಿ ರೂ. ವೆಚ್ಚದಲ್ಲಿ ಸಮುದಾಯ ಭವನ ನಿರ್ಮಾಣಕ್ಕೆ ಶೀಘ್ರದಲ್ಲೇ ಚಾಲನೆ ನೀಡಲಾಗುವುದೆಂದರು.


ಸಮಾರಂಭದಲ್ಲಿ ತಾಲೂಕು ಒಕ್ಕಲಿಗರ ಸಂಘದ ಅಧ್ಯಕ್ಷ ಆರ್. ಅನಂತಕುಮಾರ್, ಆಲೂರು ತಾಲ್ಲೂಕು ಒಕ್ಕಲಿಗರ ಸಂಘದ ಅಧ್ಯಕ್ಷ ಮೋಹನ್, ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕ ರಘು ಗೌಡ, ಗಂಡಸಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮೆಟ್ರೋಬಾಬು, ಒಕ್ಕಲಿಗ ಸಮಾಜದ ಮುಖಂಡರಾದ ತಮ್ಮೇಗೌಡ, ಆದಿಚುಂಚನಗಿರಿ ಪದವಿ ಪೂರ್ವ ಕಾಲೇಜು ಪ್ರಾಂಶುಪಾಲ ಡಾ. ಲಿಂಗರಾಜು, ದೈಹಿಕ ಶಿಕ್ಷಣ ಶಿಕ್ಷಕ ನಾಗೇಶ್ ಇತರರಿದ್ದರು.

# ದೀನ ದಲಿತರ ಏಳಿಗೆಗೆ ಶ್ರಮಿಸಿದ ಬಾಬು ಜಗಜೀವನ ರಾಂ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಹಸಿರು ಕ್ರಾಂತಿಯ ಹರಿಕಾರ, ದೀನ ದಲಿತರ ಏಳಿಗೆಗಾಗಿ ದುಡಿದ ಮಾಜಿ ಉಪ ಪ್ರಧಾನಿ ಡಾ. ಬಾಬು ಜಗಜೀವನ ರಾಂ ಅವರನ್ನು ಸ್ಮರಿಸುವುದು ಪ್ರತಿಯೊಬ್ಬರ ಜವಾಬ್ದಾರಿ ಎಂದು ಶಾಸಕ ಸಿ.ಎನ್.ಬಾಲಕೃಷ್ಣ ಹೇಳಿದರು.

ಪಟ್ಟಣದ ಮಿನಿ ವಿಧಾನಸೌಧ ಆವರಣದಲ್ಲಿ ತಾಲ್ಲೂಕು ಆಡಳಿತ, ತಾಲ್ಲೂಕು ಪಂಚಾಯಿತಿ, ಸಮಾಜ ಕಲ್ಯಾಣ ಇಲಾಖೆ ಹಾಗೂ ಪುರಸಭೆಯಿಂದ ಭಾನುವಾರ ಏರ್ಪಡಿಸಿದ್ದ ಡಾ. ಬಾಬು ಜಗಜೀವನ ರಾಂ ಅವರ 119ನೇ ಜಯಂತೋತ್ಸವದಲ್ಲಿ ಮಾತನಾಡಿ, ಬಾಬು ಜಗಜೀವನ ರಾಮ್ ನಿಸ್ವಾರ್ಥ ಸೇವೆ, ಸ್ವಾತಂತ್ರ್ಯ ಚಳವಳಿ ಮತ್ತು ಸಮರ್ಪಣಾ ಮನೋಭಾವದ ಹೋರಾಟದಿಂದಾಗಿ ಸಮಾಜಕ್ಕೆ ಆದರ್ಶ ವ್ಯಕ್ತಿಯಾಗಿದ್ದಾರೆ. ಅಧಿಕಾರ ಮತ್ತು ಆಸ್ತಿಯಿಂದ ಗಳಿಸಲಾಗದ




ಕೀರ್ತಿಯನ್ನು ಸೇವೆ ಹಾಗು ತ್ಯಾಗದಿಂದ ಗಳಿಸಬಹುದೆಂದು ಬಾಬು ಜಗಜೀವನ ರಾಮ್ ಬದುಕು ತಿಳಿಸಿಕೊಡುತ್ತದೆ.

ಬಾಬು ಜಗಜೀವನ ರಾಮ್ ಸತತ 3 ದಶಕಗಳ ಕಾಲ ಕೇಂದ್ರ ಮಂತ್ರಿಮಂಡಲದ ಸದಸ್ಯರಾಗಿ ಅಪಾರ ಆಡಳಿತ ಅನುಭವ ಗಳಿಸಿದರು. ಸಾರಿಗೆ, ಆಹಾರ, ರೈಲ್ವೆ, ಕೃಷಿ ಮತ್ತು ಸಮುದಾಯ ಅಭಿವೃದ್ಧಿ, ಕಾರ್ಮಿಕ ಮತ್ತು ಉದ್ಯೋಗ ಪುನರ್ವಸತಿ ಕೆಲಸವನ್ನು ಮಾಡಿದ ಹಿರಿಮೆ ಅವರದ್ದಾಗಿದೆ ಎಂದರು.

ಕೂಲಿ ಮಾಡಿ ಜೀವನ ಸಾಗಿಸಲು ಕಷ್ಟವಾಗಿದ್ದ ಕಾಲಘಟ್ಟದಲ್ಲಿ ಬಾಬು ಜಗಜೀವನ ರಾಮ್ ಸೃಷ್ಟಿಸಿದ ಹಸಿರು ಕ್ರಾಂತಿಯಿಂದ ಬಡವರಿಗೆ ಆಹಾರದ ಕೊರತೆ ದೂರವಾಯಿತು.

ಹಸಿರು ಕ್ರಾಂತಿಯ ಹರಿಕಾರ ಬಾಬೂಜಿ ಸಮಾಜದ ಕಟ್ಟಕಡೆಯ ವ್ಯಕ್ತಿಯ ಜೀವನಕ್ಕೂ ಆದ್ಯತೆ ಕೊಟ್ಟಿದ್ದರಿಂದ ಆಹಾರ ಪದಾರ್ಥಗಳ ಕೊರತೆಯಿಲ್ಲ. ಮಹನೀಯರ ವೈಚಾರಿಕತೆ, ವಿಚಾರ ಧಾರೆಯನ್ನು ಮುಂದಿನ ಪೀಳಿಗೆಗೆ ವರ್ಗಾಯಿಸುವ ಸಲುವಾಗಿ ಜಯಂತಿ ಆಚರಣೆ ಮಾಡಬೇಕು. ಪಟ್ಟಣದಲ್ಲಿ ಬಾಬೂಜಿಯವರ ಭವನ ನಿರ್ಮಾಣಕ್ಕೆ ನಿವೇಶನವನ್ನು ಕಾಯ್ದಿರಿಸಲಾಗಿದ್ದು, ಭವನ ನಿರ್ಮಾಣಕ್ಕೆ ಸಮಾಜ ಕಲ್ಯಾಣ ಇಲಾಖೆಗೆ 2 ಕೋಟಿ ರೂ. ಅನುದಾನಕ್ಕೆ ಮನವಿ ಸಲ್ಲಿಸಿದ್ದು ಸಮಾಜದ ಧಾರ್ಮಿಕ ಚಿಂತನೆ ಕಾರ್ಯಕ್ರಮಗಳಿಗೆ ಅನುಕೂಲವಾಗಲಿದೆ ಎಂದು ತಿಳಿಸಿದರು.

ತಹಶೀಲ್ದಾರ್ ಜಿ.ಎಸ್.ಶಂಕರಪ್ಪ, ಪೊಲೀಸ್ ಉಪ ಅಧೀಕ್ಷಕ ಎನ್. ಕುಮಾರ್, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಜಿ.ಆರ್. ಹರೀಶ್, ಪುರಸಭಾ ಮುಖ್ಯಾಧಿಕಾರಿ ಆರ್.ಯತೀಶ್ ಕುಮಾರ್, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಡಿ.ಆರ್.ತ್ಯಾಗರಾಜ್, ಕ್ಷೇತ್ರ ಶಿಕ್ಷಣಾಧಿಕಾರಿ ಹೆಚ್.ಎನ್.ದೀಪ, ಟಿಎಪಿಸಿಎಂಎಸ್ ಅಧ್ಯಕ್ಷ ವೆಂಕಟೇಶ್ ಮೂರ್ತಿ, ಹೇಮಾವತಿ ಸಹಕಾರಿ ಸಕ್ಕರೆ ಕಾರ್ಖಾನೆ ಅಧ್ಯಕ್ಷ ತೊಟಿ ಜಯರಾಮ್, ಕೆಡಿಪಿ ಸದಸ್ಯ ಮಹೇಶ್, ಕ್ಷೇತ್ರ ಸಂಪನ್ಮೂಲ ಸಮನ್ವಯ ಅಧಿಕಾರಿ ಕೆ.ಎನ್.ಅನಿಲ್, ಇಸಿಓ ಲೋಕೇಶ್, ಕಬ್ಬಾಳು ಇತರರಿದ್ದರು.

# ಜಗಜೀವನ ರಾಂ ಜಯಂತಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಪಟ್ಟಣದ ತಾಲ್ಲೂಕು ಕಚೇರಿ ಆವರಣದಲ್ಲಿ ಭಾನುವಾರ ತಾಲ್ಲೂಕು ಆಡಳಿತ, ಸಮಾಜ ಕಲ್ಯಾಣ ಇಲಾಖೆ, ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿಯಿಂದ ಉಪ ಪ್ರಧಾನಿ ಡಾ. ಬಾಬು ಜಗಜೀವನ ರಾಂ ಅವರ 119ನೇ ಜಯಂತಿ ಆಚರಿಸಲಾಯಿತು.

ತಹಶೀಲ್ದಾರ್ ಶ್ರೀಧರ್ ಕಂಕಣವಾಡಿ ಮಾತನಾಡಿ, ಡಾ. ಬಾಬು ಜಗಜೀವನ ರಾಂ ಅವರ ಹಸಿರು ಕ್ರಾಂತಿಯಿಂದ ದೇಶದಲ್ಲಿ ಬಡವರಿಗೆ ಆಹಾರದ ಕೊರತೆ ದೂರವಾಯಿತು. ಸಮಾಜದ ಕಟ್ಟ ಕಡೆಯ ವ್ಯಕ್ತಿಯ ಜೀವನಕ್ಕೂ ಆದ್ಯತೆ ಕೊಟ್ಟಿದ್ದರಿಂದ ಸಮಾಜದಲ್ಲಿ ಆಹಾರ ಪದಾರ್ಥಗಳ ಕೊರತೆ ಇಲ್ಲ. ಜಾತಿಯತೆ ವಿರುದ್ಧ ಹೋರಾಡಿದ ಅವರು ಎಲ್ಲರಲ್ಲೂ ಮಾನವೀಯತೆ ಕಂಡರು. ಆದ್ದರಿಂದ ನಾವೆಲ್ಲ ಸಮಾನರು ಎಂಬ ಮನೋಭಾವ ಬೆಳೆಸಿಕೊಳ್ಳಬೇಕು. ಡಾ.ಬಾಬು ಜಗಜೀವನ ರಾಂ ಅವರು ಹಾಕಿಕೊಟ್ಟ ಸನ್ಮಾರ್ಗದಲ್ಲಿ ಮುನ್ನಡೆಯಬೇಕು. ಮಹಾಪುರುಷರ, ಮಹಾನಾಯಕರ, ಯೋಗಿಗಳ ಜಯಂತಿ ಮಾಡುವ ಉದ್ದೇಶವನ್ನು ಸಫಲಗೊಳಿಸಬೇಕೆಂದರು.

# ಏಕಶಿಲಾ ಆಂಜನೇಯಸ್ವಾಮಿ ವಿಗ್ರಹ ಪ್ರತಿಷ್ಠಾಪನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ತಾಲೂಕಿನ ಕರಗೂರು ಕೂಡಿಗೆ (ಪಾಲಹಳ್ಳಿ) ಗ್ರಾಮದಲ್ಲಿ ಶ್ರೀ ಆಂಜನೇಯ ಸ್ವಾಮಿಯ 16 ಅಡಿ ಎತ್ತರದ ಏಕಶಿಲಾ ನೂತನ ವಿಗ್ರಹ ಪ್ರತಿಷ್ಠಾಪನೆ ಮಹೋತ್ಸವ ಭಕ್ತಿಭಾವದಿಂದ ನಡೆಯಿತು.



ಆದಿಚುಂಚನಗಿರಿ ಹಾಸನ ಶಾಖಾ ಮಠದ ಶ್ರೀ ಶಂಭುನಾಥ ಸ್ವಾಮೀಜಿ ಅವರ ಸಾನ್ನಿಧ್ಯದಲ್ಲಿ ಪೂಜಾ ಕೈಂಕರ್ಯ ನೆರವೇರಿದವು. ಕಾರ್ಯಕ್ರಮದಲ್ಲಿ ಮಾತನಾಡಿದ ಸ್ವಾಮೀಜಿ, ಆಂಜನೇಯಸ್ವಾಮಿ ಸೇವೆಯ ಪ್ರತೀಕವಾಗಿದ್ದು, ಎಲ್ಲಾ ಯುಗಗಳಲ್ಲೂ ಭಕ್ತರ ಪಾಲಿಗೆ ಶಕ್ತಿಯ ಮೂಲವಾಗಿದ್ದಾರೆ. ಭಕ್ತರು ನಿರಂತರ ರಾಮ ನಾಮ ಜಪ ಮಾಡಬೇಕು ಎಂದು ಹೇಳಿದರು.

ತುಳಸಿ ಪೂಜೆ, ಗೋ ಪೂಜೆ ಮಾಡುವ ಮನೆಗಳು ಪವಿತ್ರವಾಗುತ್ತವೆ. ಆಂಜನೇಯ ಬ್ರಹ್ಮಚಾರಿ, ಜಾಗೃತಿಯ ಪ್ರತೀಕವಾಗಿದ್ದು, ಯುವಕರಿಗೆ ಆದರ್ಶ ಎಂದರು.

ಹೆಗ್ಗಡಹಳ್ಳಿ ಮಠದ ಶ್ರೀ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ಕಳೆದ ಮೂರು ದಿನಗಳಿಂದ ಯಜ್ಞ, ಹೋಮ-ಹವನ ಸೇರಿ ಸನಾತನ ಧಾರ್ಮಿಕ ವಿಧಿವಿಧಾನಗಳೊಂದಿಗೆ ವಿಗ್ರಹ ಪ್ರತಿಷ್ಠಾಪನೆ ನೆರವೇರಿಸಲಾಗಿದೆ. ಈ ವಿಗ್ರಹದ ಮುಂದೆ ಕೆಲ ಕ್ಷಣ ಪ್ರಾರ್ಥನೆ ಮಾಡಿದರೂ ಆತ್ಮ ಶಕ್ತಿ ಹೆಚ್ಚುತ್ತದೆ. ಕರಗೂರಿನ ಇತಿಹಾಸದಲ್ಲಿ ಇದು ಸುವರ್ಣ ಕ್ಷಣವಾಗಿದ್ದು, ಗ್ರಾಮಸ್ಥರಿಗೆ ಆರೋಗ್ಯ ಹಾಗು ಆಯುಷ್ಯ ಲಭಿಸಲಿ ಎಂದು ಆಶಿಸಿದರು.

ಮಾಜಿ ಸಚಿವ ಹೆಚ್.ಡಿ.ರೇವಣ್ಣ ಮಾತನಾಡಿ, ಆಂಜನೇಯ ಸ್ವಾಮಿ ನಂಬಿದವರನ್ನು ಎಂದೂ ಕೈ ಬಿಟ್ಟಿಲ್ಲ. ಈ ಗ್ರಾಮದಲ್ಲಿ ಏಕಶಿಲಾ ವಿಗ್ರಹ ಪ್ರತಿಷ್ಠಾಪಿಸಿದ್ದು ಒಳ್ಳೆಯ ಕಾರ್ಯ ಎಂದರು.

ಶಾಸಕ ಸಿಮೆಂಟ್ ಮಂಜು ಮಾತನಾಡಿ, ತಾಲ್ಲೂಕಿನಲ್ಲಿ ಇಂತಹ ಧಾರ್ಮಿಕ ಕಾರ್ಯಕ್ರಮಗಳು ನಡೆಯುತ್ತಿರುವುದು ಅವಿಸ್ಮರಣೀಯ. ಹಿಂದೂ ಧರ್ಮದಲ್ಲಿ ಮಾತ್ರ ಈ ರೀತಿಯ ಕಾರ್ಯಕ್ರಮಗಳನ್ನು ನೋಡಬಹುದಾಗಿದೆ. ಆಂಜನೇಯನ ಶಕ್ತಿ ಅಪಾರವಾಗಿದ್ದು ನಂಬಿದವರನ್ನು ಎಂದಿಗೂ ಕೈ ಬಿಡುವುದಿಲ್ಲ ಎಂದರು.

ವಿಧಾನ ಪರಿಷತ್ ಸದಸ್ಯ ಸೂರಜ್ ರೇವಣ್ಣ ಮಾತನಾಡಿ, ಆಂಜನೇಯ ಸ್ವಾಮಿಯ ರಾಮಭಕ್ತಿ ಅಪಾರವಾಗಿದ್ದು, ಅದನ್ನು ವರ್ಣಿಸಲು ಸಾಧ್ಯವಿಲ್ಲ. ಈ ಭಾಗದ ರೈತರಿಗೆ ಬೆಳೆಗಳಿಗೆ ಉತ್ತಮ ಬೆಲೆ ದೊರಕಲಿ ಹಾಗು ಮಾನವ-ವನ್ಯಜೀವಿ ಸಂಘರ್ಷ ಅಂತ್ಯವಾಗಲಿ ಎಂದು ಆಶಿಸಿದರು.

ಮಾಜಿ ಸಚಿವ ಹೆಚ್.ಕೆ.ಕುಮಾರಸ್ವಾಮಿ ಅವರು ಮಾತನಾಡಿ, ಆಂಜನೇಯನ ಶ್ರದ್ಧೆ, ಭಕ್ತಿ, ಪರಾಕ್ರಮವು ಎಲ್ಲರಿಗೂ ಪ್ರೇರಣೆ ಎಂದರು.

ಮಾಜಿ ಶಾಸಕ ಹೆಚ್.ಎಂ.ವಿಶ್ವನಾಥ್ ಮಾತನಾಡಿ, ಸಾಮಾನ್ಯ ಜನರು ಒಂದಾಗಿ ಸುಮಾರು ಒಂದು ಹಾಗು ಅರ್ಧ ಕೋಟಿ ರೂ. ಸಂಗ್ರಹಿಸಿ ಭವ್ಯ ವಿಗ್ರಹ ನಿರ್ಮಿಸಿರುವುದು ಯುವಕರ ಸಾಧನೆಗೆ ನಿದರ್ಶನ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ರಾಷ್ಟ್ರ ರಕ್ಷಣಾ ಸೇನಾ ಅಧ್ಯಕ್ಷ ಪುನೀತ್ ಕೆರೆಹಳ್ಳಿ, ಮುಳುಗು ತಜ್ಞ ಈಶ್ವರ ಮಲ್ಪೆ, ಆಸರೆ ಫೌಂಡೇಷನ್‌ನ ಜಯರಾಜ್ ನಾಯ್ಡು ಅವರನ್ನು ಸನ್ಮಾನಿಸಲಾಯಿತು.

ವಾಯುಪುತ್ರ ಸೇವಾ ಸಮಿತಿ ಅಧ್ಯಕ್ಷ ತೇಜಸ್ವಿ, ಗೌರವ ಅಧ್ಯಕ್ಷ ರಾಮಚಂದ್ರ, ಉಪಾಧ್ಯಕ್ಷ ರಾಜಶೇಖರ, ಕಾರ್ಯದರ್ಶಿ ವಿಕಾಸ್, ಖಜಾಂಚಿ ಸಂತೋಷ ಕುಮಾರ್, ಸಮಾಜ ಸೇವಕ ಕಾಮನಹಳ್ಳಿ ಬೆಳ್ಳಿಗೌಡ, ತೀರ್ಥಾನಂದ , ತಮ್ಮೇಗೌಡ, ಜಾಗಟೆ ಶಿವಕುಮಾರ್, ಎಲ್.ಎಸ್. ತಮ್ಮೇಗೌಡ, ತಾಪಂ ಮಾಜಿ ಅಧ್ಯಕ್ಷೆ ಶ್ವೇತ ಪ್ರಸನ್ನ, ಬಿಜೆಪಿ ಮುಖಂಡ ಪುನೀತ್ ಬನ್ನಹಳ್ಳಿ, ಶಶಿಧರ್, ಜಾತಳ್ಳಿ ಪುಟ್ಟಸ್ವಾಮಿಗೌಡ, ಜಿಲ್ಲಾ ಬಿಜೆಪಿ ಅಧ್ಯಕ್ಷ ಸಿದ್ದೇಶ್ ನಾಗೇಂದ್ರ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಮಿತ್ ಶೆಟ್ಟಿ, ತಾಲ್ಲೂಕು ಅಧ್ಯಕ್ಷ ವಳಲಹಳ್ಳಿ ಅಶ್ವಥ್, ಯಡಕೇರಿ ಗಂಗಾಧರ್, ಅವಿನಾಶ್ ಹಾಗೂ ಇತರರಿದ್ದರು.

# ನಿಷೇದಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ಆದೇಶ



ಹಾಸನ : ಎಸ್.ಎಸ್.ಎಲ್.ಸಿ ಪರೀಕ್ಷೆಯ ಉತ್ತರ ಪತ್ರಿಕೆಗಳ ಮೌಲ್ಯಮಾಪನವನ್ನು ಏ.07 ರಿಂದ ಹಾಸನ ನಗರದ 06 ಕೇಂದ್ರಗಳಲ್ಲಿ ನಡೆಯಲಿದ್ದು ಮೌಲ್ಯ ಮಾಪನ ಕಾರ್ಯ ಸುಗಮವಾಗಿ ನಡೆಸಲು ಮೌಲ್ಯ ಮಾಪನ ಕೇಂದ್ರಗಳ ಸುತ್ತಲಿನ 200 ಮೀಟರ್ ವ್ಯಾಪ್ತಿಯಲ್ಲಿ ಭಾರತೀಯ ನಾಗರಿಕ ಸುರಕ್ಷಾ ಸಮಿತ (ಬಿಎನ್‌ಎಸ್‌ಎಸ್) 2023 ಸೆಕ್ಷನ್ 163 ರಡಿಯಲ್ಲಿ ಪ್ರದತ್ತವಾದ ಅಧಿಕಾರ ಚಲಾಯಿಸಿ ಮೌಲ್ಯಮಾಪನ ಕೇಂದ್ರಗಳಿಗೆ ಸಾರ್ವಜನಿಕರು, ಅನಧಿಕೃತ ವ್ಯಕ್ತಿಗಳು ಮತ್ತು ಪ್ರಚಾರಕ್ಕೆ ಬರುವ ಜನಪ್ರತಿನಿಧಿಗಳು ಪ್ರವೇಶವನ್ನು ನಿರ್ಭಂದಿಸಿ ನಿಷೇದಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಕೆ,ಎಸ್ ಲತಾ ಕುಮಾರಿ ಆದೇಶಿಸಿದ್ದಾರೆ.

ಮೌಲ್ಯ ಮಾಪನ ನಡೆಯುವ ಕೇಂದ್ರಗಳ ವಿವರ: ರಾಯಲ್ ಅಪೊಲೊ ಇಂಟರ್ ನ್ಯಾಷನಲ್ ಶಾಲೆ, ಹೇಮಾವತಿ ನಗರ, ವಿಜಯ ಪ್ರೌಡಶಾಲೆ, ಚಿಕ್ಕಹೊನ್ನೇನಹಳ್ಳಿ, ವಿಜಯ ಪ್ರೌಡಶಾಲೆ, ಚಿಕ್ಕಹೊನ್ನೇನಹಳ್ಳಿ, ಕ್ರೈಸ್ಟ್ ಆಂಗ್ಲ ಮಾಧ್ಯಮ ಶಾಲೆ ರಿಂಗ್ ರಸ್ತೆ, ಹಾಸನ, ಸಂತ ಫಲೋಮಿನ ಪ್ರೌಡ ಶಾಲೆ, ಹಾಸನ, ಸಿ,ಕೆ.ಎಸ್ ಬಾಲಕಿಯರ ಪ್ರೌಡ್ರಶಾಲೆ. ಕೆ.ಆರ್. ಪುರಂ ಸಂಪಿಗೆ ರಸ್ತೆ, ಹಾಸನ, ಸಂತ ಜೋಸೆಫರ ಪ್ರೌಡಶಾಳೆ ಸಾಲಗಾಮೆ ರಸ್ತೆ, ಹಾಸನ

ನಿಭಂದನೆಗಳ ವಿವರ: ಯಾವುದೇ ಸಾರ್ವಜನಿಕರು, 5 ಜನ ಅಥವಾ ಅದಕ್ಕಿಂತ ಹೆಚ್ಚಿನ ಸಂಖ್ಯೆಯಲ್ಲಿ ನಿಷೇಧಿತ ಪ್ರದೇಶವೆಂದು ಜಾರಿಗೊಳಿಸಿದ ಮೌಲ್ಯ ಮಾಪನ ಕೇಂದ್ರಗಳ ವ್ಯಾಪ್ತಿಯಲ್ಲಿ ಗುಂಪು ಸೇರುವುದನ್ನು ಅಥವಾ ತಿರುಗುವುದನ್ನು ನಿಷೇಧಿಸಿದೆ.

# ಇತಿಹಾಸದಲ್ಲಿ ಈ ದಿನ

## ಏಪ್ರಿಲ್-07

1948: ವಿಶ್ವ ಆರೋಗ್ಯ ಸಂಸ್ಥೆ ಸ್ಥಾಪನೆಯಾಯಿತು.
1939: ಇಟಲಿಯ ಅಲ್ಬೇನಿಯಾ ಮೇಲೆ ದಾಳಿ ಆರಂಭವಾಯಿತು.
1969: ಇಂಟರ್ನೆಟ್ ಅಭಿವೃದ್ಧಿಗೆ ದಾರಿಯಾದ ಯೋಜನೆಗೆ ಮೂಲಭೂತ ಕೆಲಸಗಳು ಆರಂಭಗೊಂಡವು.
2014: ಭಾರತದ 16ನೇ ಲೋಕಸಭೆ ಚುನಾವಣೆಯ ಮೊದಲ ಹಂತದ ಮತದಾನ ಪ್ರಾರಂಭವಾಯಿತು.
1994: ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ ಕಾರ್ಯಾರಂಭ ಮಾಡಿತು.
2010: ಶಿಕ್ಷಣದ ಹಕ್ಕು ಕಾಯಿದೆ (ಶಿಕ್ಷಣದ ಹಕ್ಕು ಅಧಿನಿಯಮ) ಜಾರಿಗೆ ಬಂದಿತು.

ಜನನ

1770: William Wordsworth, ಪ್ರಸಿದ್ಧ ಇಂಗ್ಲಿಷ್ ಕವಿ
1920: Ravi Shankar, ಖ್ಯಾತ ಸೀತಾರ್ ವಾದಕ

ಮರಣ

2012: Mike Wallace, ಪ್ರಸಿದ್ಧ ಪತ್ರಕರ್ತ

# ಭಾರತೀಯ ಪರಂಪರೆ ಭವಿಷ್ಯದ ಪೀಳಿಗೆಗೆ ಪರಿಚಯವಾಗಲಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹೊಳೆನರಸೀಪುರ: ದೇಶೀಯ ಕ್ರೀಡೆ ಮತ್ತು ಜಾನಪದ ಕಲೆ ಭಾರತೀಯ ಪರಂಪರೆಯ ಜೀವನಾಡಿಯಾಗಿದ್ದು ಅದನ್ನು ಭವಿಷ್ಯದ ಪೀಳಿಗೆಗೆ ಪರಿಚಯಿಸುವ ಅಗತ್ಯತೆ ಇದೆ ಎಂದು ವಕೀಲ ರವೀಶ್ ಅವರು ತಿಳಿಸಿದರು.




ಪಟ್ಟಣದ ಸೋಷಿಯಲ್ ಕ್ಲಬ್ ಆವರಣದಲ್ಲಿ ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್ ವತಿಯಿಂದ ಮಕ್ಕಳಿಗೆ ಆಯೋಜಿಸಲಾಗಿದ್ದ ಬೇಸಿಗೆ ಶಿಬಿರ ಉದ್ಘಾಟಿಸಿ ಮಾತನಾಡಿದ ಅವರು, ಮಕ್ಕಳಲ್ಲಿ ಅಡಗಿರುವ ಸೃಜನಶೀಲತೆ ಮತ್ತು ಕಲಾ ಪ್ರತಿಭೆಗೆ ಪ್ರೋತ್ಸಾಹ ನೀಡುವ ವೇದಿಕೆಗಳಾಗಿ ಬೇಸಿಗೆ ಶಿಬಿರ ರೂಪಗೊಳ್ಳಬೇಕು. ಆಧುನಿಕತೆ ಹೆಚ್ಚಾದಂತೆ ದೇಶಿ ಕ್ರೀಡೆ, ಜಾನಪದ ಕಲೆಗಳು ಕಣ್ಮರೆಯಾಗುತ್ತಿವೆ. ಗೋಲಿ, ಬುಗುರಿ, ಕುಂಟೆ ಬಿಲ್ಲೆ, ಲಗೋರಿ, ಚಿನ್ನಿದಾಂಡು ಆಟಗಳು ಮಕ್ಕಳ ಮಾನಸಿಕ ಹಾಗು ದೈಹಿಕ ಸಾಮರ್ಥ್ಯ ವೃದ್ಧಿಗೆ ಸಹಕಾರಿಯಾಗುತ್ತವೆ. ಅವುಗಳ ಪರಿಚಯ ಮಕ್ಕಳಿಗೆ ಆಗಬೇಕು ಎಂದರು.

ಮಕ್ಕಳು ಬೇಸಿಗೆ ಶಿಬಿರಗಳಲ್ಲಿ ಭಾಗವಹಿಸಿ ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್ ಸಂಸ್ಥೆಯ ಸಮಾಜಮುಖಿ ಕಾರ್ಯದಲ್ಲಿ ಭಾಗಿಯಾಗಿ, ವ್ಯಕ್ತಿತ್ವ ವಿಕಸನ, ಬಾಂಧವ್ಯ ವೃದ್ಧಿ, ದೇಶಪ್ರೇಮ ಮತ್ತು ಜೀವನದಲ್ಲಿ ಶಿಸ್ತು ಅಳವಡಿಸಿಕೊಳ್ಳಬೇಕು ಎಂದರು.

ವಕೀಲ ಅಶೋಕ್, ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್ ಘಟಕದ ನೂತನ ಅಧ್ಯಕ್ಷ ಮುರಳೀಧರ ಗುಪ್ತ, ಕಾರ್ಯದರ್ಶಿ ಆರ್.ಕುಮುದ ಮಾತನಾಡಿದರು

ಸೋಷಿಯಲ್ ಕ್ಲಬ್ ಅಧ್ಯಕ್ಷ ಕೆ.ಎಂ.ಹೊನ್ನಪ್ಪ, ಅಂತಾರಾಷ್ಟ್ರೀಯ ಕ್ರೀಡಾಪಟು ವಿಜಯಕುಮಾರಿ, ರಂಗಮ್ಮ, ನಾಗಾರ್ಜುನ್ ಇತರರಿದ್ದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248